ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಮಂಗಳವಾರ, ದಿನಾಂಕ : 08 ನೇ ಡಿಸೆಂಬರ್, 2020

ಕಾರ್ಮಿಕರಿಗೆ ಸರಿಯಾಗಿ ವೇತನ ನೀಡುವ ಬಗ್ಗೆ

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ):-

110 (121) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕಾರ್ಮಿಕರ ಸಂಖ್ಯೆ ಎಷ್ಟು ; ಬಡತನ ರೇಖೆಗಿಂತ ಕೆಳಗಿರುವಂತಹ ಕಾರ್ಮಿಕರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಕಾರ್ಮಿಕರಿಗೆ ತಿಂಗಳಿಗೆ ಸರಿಯಾಗಿ ವೇತನವು ದೊರೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರಿಂದ ಕಾರ್ಮಿಕರಿಗೆ ಜೀವನ ಸಾಗಿಸುವುದು ಕಷ್ಟವಾಗುವುದಿಲ್ಲವೇ; ಈ ಬಗ್ಗೆ ಅಧಿಕಾರಿಗಳಿಗೆ ಸರ್ಕಾರ ನೀಡಿದ ನಿರ್ದೇಶನಗಳೇನು ;

(ಇ) ಕಾರ್ಮಿಕರಿಗೆ ಸರಿಯಾದ ಸಮಯಕ್ಕೆ ವೇತನ ದೊರಕಿಸಿಕೊಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)